RNU AIR DHARWAD

# MARCH 25, 2024

## ALL INDIA RADIO- DHARWAD

## PRADESH SAMACHARA (KANNADA) 7:05 AM

<><><>

**ಆಕಾಶವಾಣಿ–ಪ್ರದೇಶ ಸಮಾಚಾರ**

<><><>

**ಓದಿದವರು: ಹರ್ಷವರ್ಧನ ಶೀಲವಂತ**

<><><>

**ಮುಖ್ಯಾಂಶಗಳು**

<><><>

- **ಇಂದಿನಿಂದ ಏಪ್ರಿಲ್ 6ರ ವರೆಗೆ;** ರಾಜ್ಯಾದ್ಯಂತ ಎಸ್.ಎಸ್.ಎಲ್.ಸಿ. ವಾರ್ಷಿಕ ಪರೀಕ್ಷೆ ಆರಂಭ.
- **ಭಾರತದ ನವೋದ್ಯಮ ವಲಯ,** ವಿಶ್ವದಲ್ಲೇ 3ನೇ ಸ್ಥಾನದಲ್ಲಿದೆ – ನಿರ್ಮಲಾ ಸೀತಾರಾಮನ್.
- **ಕಲ್ಯಾಣ ಕರ್ನಾಟಕದ ಮೊದಲ ಪಕ್ಷಿಧಾಮ;** ಅಂಕಸಮುದ್ರದಲ್ಲಿ, ಪ್ರಥಮ ಬಾರಿಗೆ, ನೀರು ನಾಯಿಗಳು ಗೋಚರ.
- **ವಿಶೇಷ ಚೇತನರ ಮತದಾನಕ್ಕೆ** ಅನುವಾಗುವ, ಸಕ್ಷಮ್ ಆ್ಯಪ್, ಕೇಂದ್ರ ಚುನಾವಣಾ ಆಯೋಗದಿಂದ, ಬಿಡುಗಡೆ.

<><><>

**ಈಗ ವಾರ್ತೆಗಳ ವಿವರ**

<><><>

**ಎಸ್.ಎಸ್.ಎಲ್.ಸಿ. ವಾರ್ಷಿಕ ಪರೀಕ್ಷೆಗಳು,** ಇಂದಿನಿಂದ ಏಪ್ರಿಲ್ 6ರ ವರೆಗೆ, ಬೆಳಿಗ್ಗೆ 9.30 ರಿಂದ ಮಧ್ಯಾಹ್ನ 1.45ರ ವರೆಗೆ, ರಾಜ್ಯಾದ್ಯಂತ 2 ಸಾವಿರದ 750 ಕೇಂದ್ರಗಳಲ್ಲಿ ನಡೆಯಲಿವೆ. 8 ಲಕ್ಷದ 69 ಸಾವಿರ ವಿದ್ಯಾರ್ಥಿಗಳು ಪರೀಕ್ಷೆಗೆ ಹೆಸರು ನೋಂದಾಯಿಸಿದ್ದಾರೆ.

<><><>

**ಚಾಮರಾಜನಗರ ತಾಲೂಕಿನಲ್ಲಿ** ಶಾಲೆ ತೊರೆದಿದ್ದ, ಬುಡಕಟ್ಟು ಸಮುದಾಯದ, 30 ವಿದ್ಯಾರ್ಥಿಗಳನ್ನು, ಕಳೆದ ಮೂರು ತಿಂಗಳಿಂದ ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಸಜ್ಜುಗೊಳಿಸುವ ವಿಶೇಷ ಶಿಬಿರ ಮುಕ್ತಾಯಗೊಂಡಿದೆ. ಹರದನಹಳ್ಳಿಯ ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿ ನಿಲಯದಲ್ಲಿ, ವಿಶೇಷ ಪುನಃಶ್ಚೇತನ ಶಿಬಿರದ ಸಮಾರೋಪ ಸಮಾರಂಭದಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಪಾಲ್ಗೊಂಡು, ಎಸ್.ಎಸ್.ಎಲ್.ಸಿ ನಂತರವೂ ಮುಂದಿನ ಶಿಕ್ಷಣಕ್ಕೆ ಜಿಲ್ಲಾಡಳಿತ ಸಹಾಯ ಮಾಡಲಿದೆ. ಉತ್ತಮ ಶಿಕ್ಷಣ ಪಡೆದು ಉಜ್ವಲ ಭವಿಷ್ಯ ರೂಪಿಸಿಕೊಳ್ಳುವಂತೆ, ಹಾರೈಸಿದರು.

<><><>

**ಗದಗ ಜಿಲ್ಲೆಯ** 60 ಪರೀಕ್ಷಾ ಕೇಂದ್ರಗಳ ಸುತ್ತ ಪ್ರತಿಬಂಧಕಾಜ್ಞೆ ಜಾರಿಗೊಳಿಸಿ ಗದಗ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಆದೇಶಿಸಿದ್ದಾರೆ.

<><><>

**ದಕ್ಷಿಣ ಕನ್ನಡ ಜಿಲ್ಲೆಯಲ್ಲಿ** ಎಸ್.ಎಸ್.ಎಲ್.ಸಿ. ವಾರ್ಷಿಕ ಪರೀಕ್ಷೆಗಳಿಗೆ, 30 ಸಾವಿರದ 348 ವಿದ್ಯಾರ್ಥಿಗಳು ಹೆಸರು ನೋಂದಾಯಿಸಿದ್ದಾರೆ.

<><><>

**ದಾವಣಗೆರೆ ಜಿಲ್ಲೆಯ** 84 ಕೇಂದ್ರಗಳಲ್ಲಿ ಎಸ್.ಎಸ್.ಎಲ್.ಸಿ. ಪರೀಕ್ಷೆ ನಡೆಯಲಿದೆ. 22 ಸಾವಿರದ 400 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ ಎಂದು, ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ ಕೊಟ್ರೇಶಪ್ಪ ತಿಳಿಸಿದ್ದಾರೆ.

<><><>

**ಕೇಂದ್ರ ಸರ್ಕಾರದ ಸಕಾಲಿಕ ನೀತಿ ನಿರ್ಧಾರಗಳು** ಮತ್ತು ಆರ್ಥಿಕ ಸುಧಾರಣೆಗಳು ದೇಶವನ್ನು ಕೋವಿಡ್ ಬಿಕ್ಕಟ್ಟಿನಿಂದ ಪಾರು ಮಾಡಲು ನೆರವಾಯಿತು, ಎಂದು ಕೇಂದ್ರ ಹಣಕಾಸು ಖಾತೆ ಸಚಿವರಾದ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ. ಬೆಂಗಳೂರು ಹಾಗೂ ಮೈಸೂರಿನಲ್ಲಿ ಚಿಂತಕರ ವೇದಿಕೆ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ, ಮಾತನಾಡಿದ ಅವರು, ಸಾಂಕ್ರಾಮಿಕ ಹಬ್ಬಿದ್ದ ಸಮಯದಲ್ಲಿ ನಿರ್ವಹಿಸಿದ ಪಾತ್ರಕ್ಕಾಗಿ ಜಾಗತಿಕ ಸಮುದಾಯವು, ಭಾರತದ ಕ್ಷಮತೆಯನ್ನು ಗುರುತಿಸಿದೆ ಎಂದರು. ಭಾರತದ ನವೋದ್ಯಮ ವಲಯ ಇಂದು ಅಭೂತಪೂರ್ವ ಪ್ರಗತಿ ಹೊಂದುತ್ತಿದೆ. ನವೋದ್ಯಮಕ್ಕೆ ಪೂರಕ ಪರಿಸರ ಸೃಷ್ಟಿಸಲಾಗಿದ್ದು, ವಿಶ್ವದಲ್ಲೇ ಭಾರತ 3ನೇ ಸ್ಥಾನದಲ್ಲಿದೆ ಎಂದು ತಿಳಿಸಿದರು.

<><><>

**ತೀವ್ರ ಬರಗಾಲದ ಹಿನ್ನೆಲೆ,** ಕುಡಿಯುವ ನೀರಿನ ಸಮಸ್ಯೆ ಎದುರಿಸುತ್ತಿರುವ ಹಾವೇರಿ ಜಿಲ್ಲೆಯ, ರಾಣೇಬೆನ್ನೂರು ಹಾಗೂ ಹಾವೇರಿ ನಗರಗಳಿಗೆ, ಕುಡಿಯುವ ನೀರು ಕೂಡಲೇ ಒದಗಿಸುವಂತೆ, ಹಾವೇರಿ–ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ, ಶಿಗ್ಗಾವಿ ಶಾಸಕ ಬಸವರಾಜ ಬೊಮ್ಮಾಯಿ ಆಗ್ರಹಿಸಿದ್ದಾರೆ. ಹಾವೇರಿ ಜಿಲ್ಲಾಧಿಕಾರಿ ಅವರೊಂದಿಗೆ ದೂರವಾಣಿ ಮೂಲಕ ಮಾತನಾಡಿದ ಅವರು, ತುಂಗಭದ್ರಾ ನದಿಯಿಂದ ರಾಣೇಬೆನ್ನೂರು ಹಾಗೂ ಹಾವೇರಿಗೆ ಕುಡಿಯುವ ನೀರು ಪೂರೈಸಲು, ವ್ಯವಸ್ಥೆ ಮಾಡುವಂತೆ, ಪ್ರಾದೇಶಿಕ ಆಯುಕ್ತರಿಗೆ ತಿಳಿಸುವಂತೆ ಸೂಚಿಸಿದ್ದಾಗಿ, ಮಾಹಿತಿ ನೀಡಿದ್ದಾರೆ.

<><><>

**ವಿಜಯನಗರ ಜಿಲ್ಲೆ, ಹೊಸಪೇಟೆ ತಾಲೂಕು,** ನಲ್ಲಾಪುರ ಗ್ರಾಮದಲ್ಲಿ ಕಲುಷಿತ ನೀರು ಸೇವಿಸಿ, 18 ಜನ ಅಸ್ವಸ್ಥರಾಗಿದ್ದು, ಇಬ್ಬರು ಆಸ್ಪತ್ರೆಗೆ ದಾಖಲಾಗಿದ್ದಾರೆ. ಉಳಿದವರ ಆರೋಗ್ಯದಲ್ಲಿ ಸ್ಥಿರತೆ ಕಂಡು ಬಂದಿದೆ ಎಂದು ಜಿಲ್ಲಾ ಪಂಚಾಯತ್ ಸಿ.ಇ.ಓ. ಬಿ. ಸದಾಶಿವ ಪ್ರಭು ತಿಳಿಸಿದ್ದಾರೆ.

<><><>

**ಶಿವಮೊಗ್ಗ ಜಿಲ್ಲೆಯ ಯಾವುದೇ ಭಾಗದಲ್ಲಿ** ಕುಡಿಯುವ ನೀರಿಗೆ ಸಮಸ್ಯೆಯಾಗದಂತೆ, ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಲು, ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

<><><>

**ವಿಜಯನಗರ ಜಿಲ್ಲೆ, ಹಗರಿಬೊಮ್ಮನಹಳ್ಳಿ ತಾಲೂಕು,** ಅಂಕಸಮುದ್ರ ಪಕ್ಷಿಧಾಮ, ರಾಮ್ಸರ್ ಜೌಗು ಪ್ರದೇಶ ಪಟ್ಟಿಗೆ ಸೇರಿದ, ಕಲ್ಯಾಣ ಕರ್ನಾಟಕದ ಮೊದಲ ಪಕ್ಷಿಧಾಮ ಎಂಬ, ಅಂತಾರಾಷ್ಟ್ರೀಯ ಮನ್ನಣೆಗೆ ಪ್ರಾಪ್ತವಾಗಿದೆ. ಅಲ್ಲಿ ನೀರು ನಾಯಿಗಳು

ಇತ್ತೀಚೆಗೆ ಪ್ರಥಮ ಬಾರಿಗೆ ಕಂಡುಬಂದಿವೆ. ಪ್ರದೇಶ ಸಮಾಚಾರಕ್ಕಾಗಿ ಈ ಕುರಿತು ಮಾಹಿತಿ ನೀಡಿದ್ದಾರೆ, ಜಿಲ್ಲಾ ಅರಣ್ಯ ಸಂರಕ್ಷಣಾಧಿಕಾರಿ, ಅರ್ಸಲನ್.

<><><>

**ಅರ್ಸಲನ್, ಐ.ಎಫ್.ಎಸ್. ಧ್ವನಿ 36 ಸೆಕೆಂದುಗಳು**

<><><>

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..**

<><><>

**ವಿಶೇಷ ಚೇತನ ವ್ಯಕ್ತಿಗಳಿಗೆ ಮತದಾನ ಮಾಡಲು** ಅನುವಾಗುವ, ಸಕ್ಷಮ್ ಆ್ಯಪ್‌ಅನ್ನು, ಕೇಂದ್ರ ಚುನಾವಣಾ ಆಯೋಗ ಬಿಡುಗಡೆ ಮಾಡಿದೆ. ಸಕ್ಷಮ್ ಆ್ಯಪ್ ಎಲ್ಲ ಮತ ಕೇಂದ್ರಗಳಲ್ಲೂ ಲಭ್ಯವಿರಲಿದೆ. ಜತೆಗೆ, ಮತದಾನ ನಡೆಯುವ ಎಲ್ಲ ಶಾಲೆಗಳಲ್ಲಿ ಕುಡಿಯುವ ನೀರು, ಶೌಚಾಲಯ, ವಿದ್ಯುತ್ ವ್ಯವಸ್ಥೆ ಸೇರಿದಂತೆ, ಗಾಲಿ ಕುರ್ಚಿ ಸೌಲಭ್ಯ ಕಲ್ಪಿಸಲು ಆಯೋಗ ಸೂಚನೆ ನೀಡಿದೆ. ಕೆಲವೆಡೆ ವಿಶೇಷ ಚೇತನ ಸಿಬ್ಬಂದಿ ಹಾಗೂ ಮಹಿಳಾ ಸಿಬ್ಬಂದಿ ಮತಗಟ್ಟೆಗಳನ್ನು ನಿರ್ವಹಿಸಲಿದ್ದಾರೆ. 85 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರು ಮತ್ತು ವಿಶೇಷ ಚೇತನರಿಗಾಗಿ ವಾಹನ ಸೌಲಭ್ಯವನ್ನೂ ಕಲ್ಪಿಸಲಾಗುತ್ತಿದೆ. 18ನೇ ಲೋಕಸಭೆ ಸಾರ್ವತ್ರಿಕ ಚುನಾವಣೆಯಲ್ಲಿ ಎಲ್ಲ ಅರ್ಹ ಮತದಾರರೂ, ಮತ ಚಲಾಯಿಸಲು ಸರ್ವ ಸಿದ್ಧತೆ ನಡೆಸಲಾಗಿದೆ, ಎಂದು ಕೇಂದ್ರ ಚುನಾವಣಾ ಆಯೋಗ ತಿಳಿಸಿದೆ.

<><><>

**ರಾಜ್ಯದ 28 ಲೋಕಸಭಾ ಕ್ಷೇತ್ರಗಳಲ್ಲಿ,** ಆಯಾ ಜಿಲ್ಲಾಡಳಿತಗಳು ಕೈಗೊಳ್ಳುತ್ತಿರುವ ಚುನಾವಣಾ ಪೂರ್ವ ಸಿದ್ಧತೆಗಳ ಕುರಿತು, ಈಗ ಮಾಹಿತಿ.

<><><>

**ಎಲ್ಲ ರಾಜಕೀಯ ಪಕ್ಷಗಳು ಮಾದರಿ** ನೀತಿ ಸಂಹಿತೆಯನ್ನು ಕಡ್ಡಾಯವಾಗಿ ಪಾಲಿಸಲು ಸೂಚಿಸಲಾಗಿದೆ ಎಂದು, ದಾವಣಗೆರೆ ಜಿಲ್ಲಾಧಿಕಾರಿ ಡಾಕ್ಟರ್ ಎಂ.ವಿ.ವೆಂಕಟೇಶ್ ತಿಳಿಸಿದ್ದಾರೆ. ಜಿಲ್ಲಾಡಳಿತ ಭವನದಲ್ಲಿ ನಡೆದ ರಾಜಕೀಯ ಪಕ್ಷಗಳ ಮುಖಂಡರ ಸಭೆಯಲ್ಲಿ ಮಾತನಾಡಿದ ಅವರು, ದಾವಣಗೆರೆ ಲೋಕಸಭಾ ಚುನಾವಣೆಗೆ ಎಲ್ಲ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ ಎಂದರು.

<><><>

**ಜಿಲ್ಲಾಧಿಕಾರಿ ಎಂ.ವಿ. ವೆಂಕಟೇಶ ಧ್ವನಿ 55 ಸೆಕೆಂದುಗಳು**

<><><>

**ಲೋಕಸಭಾ ಚುನಾವಣೆ ಹಿನ್ನೆಲೆ,** ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಮತದಾರ ಪಟ್ಟಿಗೆ ಹೆಸರು ನೋಂದಾಯಿಸಲು, ಇಂದು ಕೊನೆಯ ದಿನ. ಚುನಾವಣಾ ಆಯೋಗಕ್ಕೆ ಕಳುಹಿಸಿದ ಜಿಲ್ಲೆಯ ಸಾವಿರದ 661 ಮತಗಟ್ಟೆಗಳ ಮತದಾರ ಪಟ್ಟಿಗೆ ಅನುಮೋದನೆ ದೊರೆತಿದೆ ಎಂದು, ಜಿಲ್ಲಾಧಿಕಾರಿ ಟಿ. ವೆಂಕಟೇಶ್ ತಿಳಿಸಿದ್ದಾರೆ. ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜರುಗಿದ, ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಭೆಯಲ್ಲಿ, ಅವರು ಮಾತನಾಡಿದರು. ನಮೂನೆ 6 ರಲ್ಲಿ ಮತದಾರ ಪಟ್ಟಿಗೆ ಹೆಸರು

ಸೇರಿಸಲು ಅರ್ಜಿ ಸಲ್ಲಿಸಬಹುದು. ಆನ್ಲೈನ್ ಮೂಲಕ ಸಲ್ಲಿಸಿದ ಅರ್ಜಿಗಳನ್ನು ಸಹ ಪರಿಗಣಿಸಲಾಗುವುದು. ಜಿಲ್ಲೆಯಲ್ಲಿ 31 ಸಾವಿರದ 9ನೂರಾ 26 ವಿಶೇಷ ಚೇತನ ಮತದಾರರಿದ್ದು, ಫಾರ್ಮ್ 12 ಡಿ ವಿತರಿಸುವ ಕಾರ್ಯ ಪ್ರಗತಿಯಲ್ಲಿದೆ ಎಂದರು.

<><><>

**ಕಲ್ಯಾಣ ಕರ್ನಾಟಕದ ರಾಯಚೂರು ಲೋಕಸಭಾ ಮತಕ್ಷೇತ್ರದಲ್ಲಿ,** ಮೇ 07 ರಂದು ಮತದಾನ ನಡೆಯಲಿದೆ. ಎಲ್ಲಾ ಪೂರ್ವ ಸಿದ್ಧತೆಗಳನ್ನು ಅಚ್ಚುಕಟ್ಟಾಗಿ ಕೈಗೊಳ್ಳುವಂತೆ, ಕಲಬುರ್ಗಿ ಪ್ರಾದೇಶಿಕ ಆಯುಕ್ತ ಶ್ರೀಕೃಷ್ಣ ಬಾಜಪೇಯಿ, ಚುನಾವಣಾ ಕರ್ತವ್ಯ ನಿರತ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ರಾಯಚೂರು ಮತಕ್ಷೇತ್ರ ವ್ಯಾಪ್ತಿಯ, ಯಾದಗಿರಿ ಜಿಲ್ಲೆ ಶಹಾಪುರ ತಾಲೂಕಿನ ಹತ್ತಿಗೂಡೂರು ಗ್ರಾಮದ ಮತಗಟ್ಟೆ ಕೇಂದ್ರಕ್ಕೆ ಭೇಟಿ ನೀಡಿ, ಅವರು ಪರಿಶೀಲಿಸಿದರು. ಮುಕ್ತ, ನ್ಯಾಯ ಸಮ್ಮತ ಹಾಗೂ ಪಾರದರ್ಶಕ ಮತದಾನಕ್ಕೆ ಯಾವುದೇ ರೀತಿಯ ಲೋಪವಾಗದಂತೆ ಎಚ್ಚರ ವಹಿಸುವಂತೆ ಅವರು, ಕಟ್ಟುನಿಟ್ಟಿನ ಸೂಚನೆ ನೀಡಿದರು.

<><><>

**ಹಿಂದಿನ ಲೋಕಸಭೆ, ವಿಧಾನಸಭೆಗಳ** ಸಾರ್ವತ್ರಿಕ ಚುನಾವಣೆಯ ಮತದಾನ ಪ್ರಮಾಣದ ಮಾಹಿತಿ ಕಲೆ ಹಾಕಲಾಗಿದೆ. ಅತೀ ಕಡಿಮೆ ಮತದಾನವಾದ ಮತಗಟ್ಟೆಗಳ ವ್ಯಾಪ್ತಿಯಲ್ಲಿ ಸ್ವೀಪ್ ಚಟುವಟಿಕೆ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲಾಗಿದೆ ಎಂದು, ಜಿಲ್ಲಾ ಪಂಚಾಯಿತಿ ಸಿ.ಇ.ಒ. ಈಶ್ವರ ಕಾಂದೂ ತಿಳಿಸಿದ್ದಾರೆ. ಕಾರವಾರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರವಾಸಿ ತಾಣಗಳಲ್ಲಿಯೂ ಸ್ವೀಪ್ ಚಟುವಟಿಕೆ ನಡೆಯಲಿದೆ. ವಿಶೇಷ ಚೇತನರಿಂದ ದ್ವಿಚಕ್ರ ವಾಹನ ಜಾಥಾ, ಸಂತೆ, ಜಾತ್ರೆಗಳಲ್ಲಿ ಮತದಾರರ ಜಾಗೃತಿಗೆ ವಿಶೇಷ ಸಂದೇಶ, ಕಸ ಸಂಗ್ರಹಣೆ ವಾಹನಗಳ ಮೂಲಕ ಪ್ರಚಾರ ಸೇರಿದಂತೆ, 25ಕ್ಕೂ ಹೆಚ್ಚು ಚಟುವಟಿಕೆಗಳ ಮೂಲಕ, ಮತದಾರರ ಜಾಗೃತಿ ನಡೆಸಲು ನಿಶ್ಚಯಿಸಲಾಗಿದೆ ಎಂದರು.

<><><>

**ಲೋಕಸಭಾ ಚುನಾವಣೆ ಅಂಗವಾಗಿ,** ಚಾಮರಾಜನಗರದಲ್ಲಿ, 'ನನ್ನ ನಡೆ–ಮತಗಟ್ಟೆ ಕಡೆ' ಹಾಗೂ 'ಚುನಾವಣೆ ಪರ್ವ–ದೇಶದ ಗರ್ವ' ಘೋಷಣೆಗಳೊಂದಿಗೆ, ಮತದಾನದ ಬಗ್ಗೆ ಜನ ಜಾಗೃತಿ ಮೂಡಿಸಲಾಯಿತು. ಜಿಲ್ಲಾ ಪಂಚಾಯ್ತಿ ಉಪ ಕಾರ್ಯದರ್ಶಿ ಪಿ. ಲಕ್ಷ್ಮೀ ಅವರು, ಜಾಥಾಕ್ಕೆ ಚಾಲನೆ ನೀಡಿ ಮಾತನಾಡಿ, ಮಾತದಾನದ ಬಗ್ಗೆ ಅರಿವು ಮೂಡಿಸುವ ಮಾನವ ಸರಪಳಿ ಗಮನ ಸೆಳೆದಿದೆ ಎಂದರು.

<><><>

**ದಕ್ಷಿಣ ಕನ್ನಡ ಜಿಲ್ಲೆಯ** ಎಲ್ಲ ಚರ್ಚ್‌ಗಳಲ್ಲಿ ಕ್ರೈಸ್ತ ಬಾಂಧವರು, ನಿನ್ನೆ ಶ್ರದ್ಧಾ ಭಕ್ತಿಯಿಂದ ಪಾಮ್ ಸಂಡೇ – ಗರಿಗಳ ಭಾನುವಾರವನ್ನು ಆಚರಿಸಿದರು. ಯೇಸು ಕ್ರಿಸ್ತ ಶಿಲುಬೆಗೆ ಏರುವ ಒಂದು ವಾರ ಮೊದಲು, ಅಂದಿನ ಜೆರೋಸಲೆಂ ಪಟ್ಟಣವನ್ನು, ಯೇಸು ಕ್ರಿಸ್ತರು ಪ್ರವೇಶಿಸುವಾಗ, ಯಹೂದಿಗಳು ಆಲಿವ್ ಮರದ ಗರಿಗಳಿಂದ ದಾರಿಯನ್ನು ಶೃಂಗರಿಸಿ, ಅವರನ್ನು ಬರಮಾಡಿಕೊಂಡಿದ್ದರು. ಈ ನಂಬಿಕೆಯ ಮೇಲೆ, ಪ್ರತಿ ವರ್ಷವೂ ಪಾಮ್ ಸಂಡೇ ಆಚರಣೆ ನಡೆಯುತ್ತದೆ. ವಿಶೇಷವಾಗಿ ಕ್ರೈಸ್ತರು ಆಚರಿಸುವ, ಕಪ್ಪು ತಿಂಗಳ ಕೊನೆ ವಾರದಲ್ಲಿ, ಪವಿತ್ರ ವಾರದ ಆರಂಭದ ದಿನದಂದು, ಗರಿಗಳ ಭಾನುವಾರ ಆಚರಿಸುತ್ತಾರೆ.

<><><>

**ಈಗ ಸಂಕ್ಷಿಪ್ತ ಸುದ್ದಿಗಳು:**

<><><>

**ಕ್ಷಯ ರೋಗ ನಿರ್ಮೂಲನೆ,** ರಾಷ್ಟ್ರೀಯ ಘಟಕ, ಕ್ಷಯ ರೋಗ ವಿಶ್ವ ದಿನದ ಹಿನ್ನೆಲೆ, 'ಹೌದು! ನಾವು ಕ್ಷಯವನ್ನು ಕೊನೆಗೊಳಿಸಬಹುದು' ಎಂಬ ಧ್ಯೇಯದೊಂದಿಗೆ, ಬಳ್ಳಾರಿಯಲ್ಲಿ ಜನ ಜಾಗ್ರತಿ ಜಾಥಾ ಆಯೋಜಿಸಿತ್ತು.

<><><>

**ಮೈಸೂರು–ಕೊಡಗು ಮತ್ತು ಚಾಮರಾಜನಗರ** ಮೂರು ಜಿಲ್ಲೆಗಳ ವ್ಯಾಪ್ತಿಯ ಸಚಿವರು, ಮಾಜಿ ಸಚಿವರು, ಜಿಲ್ಲಾ ಹಾಗೂ ಬ್ಲಾಕ್ ಪದಾಧಿಕಾರಿಗಳ ಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪಾಲ್ಗೊಂಡಿದ್ದರು.

<><><>

**ಬಾಗಲಕೋಟೆ ಜಿಲ್ಲೆ ತೇರದಾಳ** ಮತಕ್ಷೇತ್ರ ವ್ಯಾಪ್ತಿಯ ಮದಬಾವಿ ಗ್ರಾಮದಿಂದ 1 ಲಕ್ಷ 50 ಸಾವಿರ ರೂಪಾಯಿ ಮೌಲ್ಯದ ಅಕ್ರಮ ದಾಸ್ತಾನು ಮದ್ಯವನ್ನು, ವಶ ಪಡಿಸಿಕೊಳ್ಳಲಾಗಿದೆ.

<><><>

**ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು:**

<><><>

- **ಇಂದಿನಿಂದ ಏಪ್ರಿಲ್ 6ರ ವರೆಗೆ;** ರಾಜ್ಯಾದ್ಯಂತ ಎಸ್.ಎಸ್.ಎಲ್.ಸಿ. ವಾರ್ಷಿಕ ಪರೀಕ್ಷೆ ಆರಂಭ.
- **ಭಾರತದ ನವೋದ್ಯಮ ವಲಯ,** ವಿಶ್ವದಲ್ಲೇ 3ನೇ ಸ್ಥಾನದಲ್ಲಿದೆ – ನಿರ್ಮಲಾ ಸೀತಾರಾಮನ್.
- **ಕಲ್ಯಾಣ ಕರ್ನಾಟಕದ ಮೊದಲ ಪಕ್ಷಿಧಾಮ;** ಅಂಕಸಮುದ್ರದಲ್ಲಿ, ಪ್ರಥಮ ಬಾರಿಗೆ, ನೀರು ನಾಯಿಗಳು ಗೋಚರ.
- **ವಿಶೇಷ ಚೇತನರ ಮತದಾನಕ್ಕೆ** ಅನುವಾಗುವ, ಸಕ್ಷಮ್ ಆ್ಯಪ್, ಕೇಂದ್ರ ಚುನಾವಣಾ ಆಯೋಗದಿಂದ, ಬಿಡುಗಡೆ.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಗ್ಗೆ 7.35 ಕ್ಕೆ.**

<><><>

**ಹರ್ಷ**